RNU AIR DHARWAD

**FEBRUARY 19, 2026**
**ALL INDIA RADIO- DHARWAD**
**PRADESH SAMACHARA (KANNADA) 7:05 AM**

<><><><>

ಮುಖ್ಯಾಂಶಗಳು

- **ಬಂಡೀಪುರ, ನಾಗರಹೊಳೆ ಹುಲಿ ಸಂರಕ್ಷಿತ ಪ್ರದೇಶದಲ್ಲಿ, ಸಫಾರಿ ಮತ್ತೆ ಆರಂಭಿಸಲು, ಅನುಮತಿ.**

- **ರಾಜ್ಯ ಸರ್ಕಾರ ಆರ್ಥಿಕ ಮುಗ್ಗಟ್ಟಿನಿಂದ ಬಳಲುತ್ತಿದೆ: ವಿಪಕ್ಷ ನಾಯಕ ಆರ್.ಅಶೋಕ ಆರೋಪ.**

- **ಬೆಂಗಳೂರಿನಲ್ಲಿ ಕಸ ವಿಲೇವಾರಿಗೆ ಅಡ್ಡಿಪಡಿಸುವವರ ವಿರುದ್ಧ ಕ್ರಮ – ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ.**

- **ವಿಧಾನಸಭೆಯ 9ನೇ ಅಧಿವೇಶನದ ಮುಂದುವರೆದ ಉಪವೇಶನ ಮಾರ್ಚ್ 6 ರಿಂದ ಆರಂಭ; ಅಂದು 2026–27 ನೇ ಸಾಲಿನ ಆಯವ್ಯಯ ಮಂಡನೆ.**

**ವಾರ್ತೆಗಳ ವಿವರ...**

<><><>

**ಬಂಡೀಪುರ, ನಾಗರಹೊಳೆ ಹುಲಿ ಸಂರಕ್ಷಿತ** ಪ್ರದೇಶದಲ್ಲಿ, ಸಫಾರಿಯನ್ನು ಮತ್ತೆ ಆರಂಭಿಸಲು, ಅನುಮತಿ ನೀಡಲಾಗಿದೆ ಎಂದು, ಅರಣ್ಯ, ಪರಿಸರ ಖಾತೆ ಸಚಿವ ಈಶ್ವರ ಖಂಡ್ರೆ ತಿಳಿಸಿದ್ದಾರೆ. ಹುಲಿ ದಾಳಿಯಿಂದ ಸರಣಿ ಸಾವುಗಳು ಸಂಭವಿಸಿದ ಹಿನ್ನೆಲೆ; ನವೆಂಬರ್ 7ರಿಂದ ಸಫಾರಿಯನ್ನು ಸ್ಥಗಿತಗೊಳಿಸಲಾಗಿತ್ತು. ಇದರ ಪರಿಣಾಮಗಳ ಅಧ್ಯಯನಕ್ಕೆ ರಚಿಸಲಾಗಿದ್ದ ತಾಂತ್ರಿಕ ಸಮಿತಿ, ವರದಿ ನೀಡಿದೆ. ಅದನ್ನು ಆಧರಿಸಿ, ಬಂಡೀಪುರದಲ್ಲಿ 8 ಗಂಟೆಗಳ ಬದಲಾಗಿ 5 ಗಂಟೆ, ಸುಂಕದಕಟ್ಟೆಯಲ್ಲಿ 6 ಗಂಟೆ, ನಾಗರಹೊಳೆಯಲ್ಲಿ 4 ಗಂಟೆ ಸಫಾರಿಗೆ ಪ್ರಥಮ ಹಂತದಲ್ಲಿ ಅನುಮತಿ ನೀಡಲಾಗಿದೆ. ಮುಂದಿನ 2 ತಿಂಗಳ ಒಳಗೆ ಸಫಾರಿ ವಾಹನಗಳಿಗೆ ಇಂಜಿನ್ ಸಂಪರ್ಕಿತ ಜಿಪಿಎಸ್ ಮತ್ತು ಡ್ಯಾಶ್‌ಕ್ಯಾಮ್ ಅಳವಡಿಸುವ ಷರತ್ತು ವಿಧಿಸಲಾಗಿದೆ. ಸಫಾರಿಯ ಟ್ರಿಪ್ ಮತ್ತು ಸಮಯ ಕಡಿಮೆ ಮಾಡಲಾಗಿದ್ದು, ಶೇಕಡ 50ರಷ್ಟು ವಾಹನಗಳನ್ನು ಮಾತ್ರ ಬಳಸಲಾಗುತ್ತಿದೆ ಎಂದು ಹೇಳಿದರು.

<><><>

**ರಾಜ್ಯ ಸರ್ಕಾರ ಆರ್ಥಿಕ ಮುಗ್ಗಟ್ಟಿನಿಂದ** ಬಳಲುತ್ತಿದೆ. ಪೋಷಕರಿಲ್ಲದ ಮಕ್ಕಳ ಪೋಷಣೆಗೂ 7 ತಿಂಗಳಿಂದ ಹಣ ಬಿಡುಗಡೆ ಮಾಡಿಲ್ಲ ಎಂದು ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್.ಅಶೋಕ ಆರೋಪಿಸಿದ್ದಾರೆ. ತಂದೆ–ತಾಯಿಗಳಿಲ್ಲದ 26 ಸಾವಿರದ 334 ಮಕ್ಕಳು ರಾಜ್ಯದಲ್ಲಿ ನೋಂದಣಿಯಾಗಿದ್ದಾರೆ. ಅವರ ಪೋಷಣೆಗೆ ಮಾಸಿಕ 4 ಸಾವಿರ ರೂಪಾಯಿಗಳನ್ನು ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಜಂಟಿಯಾಗಿ ನೀಡುತ್ತವೆ. ಕಳೆದ 7 ತಿಂಗಳಿನಿಂದಲೂ 75 ಕೋಟಿ ರೂಪಾಯಿಗಳ ಈ ಹಣವನ್ನು ಬಿಡುಗಡೆ ಮಾಡದೇ, ಬಾಕಿ ಉಳಿಸಿಕೊಳ್ಳಲಾಗಿದೆ ಎಂದು ವಿವರಿಸಿದರು. ಸಾರಿಗೆ ನಿಗಮಗಳ ನೌಕರರು ಹಿಂಬಾಕಿ ಬಿಡುಗಡೆಗೆ ಒತ್ತಾಯಿಸಿ, ಸರ್ಕಾರದ ಎಚ್ಚರಿಕೆಯನ್ನೂ ಲೆಕ್ಕಿಸದೇ, ಮುಷ್ಕರ ನಡೆಸುತ್ತಿದ್ದಾರೆ. ಈ ಹಿಂದೆ, ತಾವು ಸಚಿವರಾಗಿದ್ದಾಗ, ಸಾರಿಗೆ ಸಂಸ್ಥೆಗಳನ್ನು ಲಾಭದ ಹಂತಕ್ಕೆ ಕೊಂಡೊಯ್ಯಲಾಗಿತ್ತು. ಈಗ ನಷ್ಟದಲ್ಲಿವೆ. ಹೀಗಾಗಿ, ನೌಕರರು ಮುಷ್ಕರ ನಡೆಸುವ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಹೇಳಿದರು. ಕಳೆದ 3 ದಿನಗಳಿಂದಲೂ ಬೆಂಗಳೂರಿನಲ್ಲಿ ಕಸ ವಿಲೇವಾರಿ ಮಾಡಲಾಗುತ್ತಿಲ್ಲ. ಹೆದ್ದಾರಿಗಳ ಪಕ್ಕದಲ್ಲಿಯೇ ಕಸ ಸುರಿಯಲಾಗಿದೆ. ಬೆಂಗಳೂರು ಕಸದ ರಾಶಿಯಾಗುತ್ತಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು. ರಾಜ್ಯ ಸರ್ಕಾರ ಆರ್ಥಿಕ ಸ್ಥಿತಿಗತಿಯ ಬಗ್ಗೆ, ಶ್ವೇತಪತ್ರ ಹೊರಡಿಸುವಂತೆ ಅವರು, ಆಗ್ರಹಿಸಿದರು.

<><><>

**ಬೆಂಗಳೂರಿನಲ್ಲಿ ಕಸ ವಿಲೇವಾರಿಗೆ ಅಡ್ಡಿಪಡಿಸುವವರ ವಿರುದ್ಧ ಎಸ್ಮಾ** ಕಾಯ್ದೆಯ ಅಡಿ, ಪ್ರಕರಣ ದಾಖಲಿಸುವುದಾಗಿ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ ಹೇಳಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಸ ವಿಲೇವಾರಿಯಲ್ಲಿ ಮೊದಲಿನಿಂದ ನಡೆದುಕೊಂಡು ಬಂದ ಪದ್ಧತಿಯನ್ನೇ ನಾವು ಮುಂದುವರಿಸಿದ್ದೇವೆ. ಅಭಿವೃದ್ಧಿಗೆ ಹೆಚ್ಚು ಹಣ ನೀಡಬೇಕು ಎಂಬ ಒತ್ತಡ ಹೇರಿ, ಕಸ ಸಾಗಾಣಿಕೆಗೆ ಅಡ್ಡಿಪಡಿಸಲಾಗುತ್ತಿದೆ. ಇದು ಸರಿಯಲ್ಲ. ಇನ್ನು ಮುಂದೆ, ಕಸ ಸಾಗಾಣಿಕೆಗೆ ಅಡ್ಡಿಪಡಿಸುವವರ ಮನೆಯ ಮುಂದೆಯೇ ತ್ಯಾಜ್ಯವನ್ನು ಸುರಿಯುವುದಾಗಿ ಹೇಳಿದರು. ಸರ್ಕಾರದಲ್ಲಿ ಭ್ರಷ್ಟಾಚಾರ ಹೆಚ್ಚಾಗಿದೆ ಎಂದು ಆರೋಪ ಮಾಡುವ ಗುತ್ತಿಗೆದಾರರ ಸಂಘದವರು, ದೂರು ದಾಖಲಿಸಲಿ. ಈ ಹಿಂದೆ, ನಿಗದಿತ ಮೊತ್ತಕ್ಕಿಂತಲೂ ಹೆಚ್ಚಿನ ಕಾಮಗಾರಿಗಳನ್ನು ಗುತ್ತಿಗೆ ಪಡೆಯಲಾಗಿದೆ. ಅದರಲ್ಲೂ ನಾವು ಹಣಕಾಸಿನ ನಿರ್ವಹಣೆ ಮಾಡುತ್ತಿದ್ದೇವೆ ಎಂದು ಹೇಳಿದ್ದಾರೆ.

<><><>

**ಕರ್ನಾಟಕ ರೇಷ್ಮೆ ಉದ್ಯಮಗಳ ನಿಗಮದ ಲಾಭಾಂಶದ** ಪೈಕಿ, ರಾಜ್ಯ ಸರ್ಕಾರದ ಪಾಲು 30 ಕೋಟಿ 34 ಲಕ್ಷ 78 ಸಾವಿರದ 500 ರೂಪಾಯಿಗಳನ್ನು ಮುಖ್ಯಮಂತ್ರಿಗಳ ಪರಿಹಾರ ನಿಧಿಗೆ ನೀಡಲಾಯಿತು. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಡಿವಿಡೆಂಡ್‌ನ ಚೆಕ್ಕನ್ನು ಸ್ವೀಕರಿಸಿದರು.

<><><>

**ಜೈಲಿನ ಒಳಗೆ ಬರುವ ಮತ್ತು ಹೊರಗೆ ಹೋಗುವ ಖೈದಿಗಳಿಗೆ ಎನ್‌ಡಿಪಿಎಸ್ ತಪಾಸಣೆ** ನಡೆಸಲಾಗುತ್ತದೆ ಎಂದು ಕಾರಾಗೃಹ ಇಲಾಖೆ ಡಿಜಿಪಿ ಅಲೋಕ್ ಕುಮಾರ್ ತಿಳಿಸಿದ್ದಾರೆ. ಹುಬ್ಬಳ್ಳಿಯ ಉಪಕಾರಾಗೃಹಕ್ಕೆ ದಿಢೀರ್ ಭೇಟಿ ನೀಡಿದ ಅವರು ಜೈಲಿನ ಕಾರ್ಯವೈಖರಿ ಬಗ್ಗೆ ಪರಿಶೀಲನೆ ನಡೆಸಿದರು. ಸಬ್ ಜೈಲ್ ಕಟ್ಟಡ, ಗಾರ್ಡನ್, ಖೈದಿಗಳಿಗೆ ಇರುವ ವ್ಯವಸ್ಥೆ ಕುರಿತು ಮಾಹಿತಿ ಪಡೆದರು. ಖೈದಿಗಳ ಕೊಠಡಿ ಪರಿಶೀಲನೆ ನಡೆಸಿ ಅವರೊಂದಿಗೆ ಮಾತುಕತೆ ನಡೆಸಿದರು. ಈ ವೇಳೆ ಮಾತನಾಡಿದ ಅವರು, ಎನ್‌ಡಿಪಿಎಸ್ ತಪಾಸಣೆ ನಡೆಸುವುದರಿಂದ ಜೈಲಿನಲ್ಲಿಯೂ ಮಾದಕ ವಸ್ತು ಸರಬರಾಜು ಆಗುತ್ತಿರುವುದನ್ನು ಪತ್ತೆ ಹಚ್ಚಲಾಗುವದು ಎಂದು ಹೇಳಿದ್ದಾರೆ. ಹುಬ್ಬಳ್ಳಿಯ ಕಾರಾಗೃಹದಲ್ಲಿ 132 ಖೈದಿಗಳಿದ್ದು, ಇದರಲ್ಲಿ ಅತೀ ಹೆಚ್ಚು ಕೊಲೆ ಪ್ರಕರಣಗಳ ಖೈದಿಗಳೇ ಆಗಿದ್ದಾರೆ. ಬಿಡುಗಡೆ ಬಳಿಕ ಅವರ ಜೀವನಕ್ಕೆ ಸಹಕಾರಿಯಾಗಲು ಖೈದಿಗಳಿಗೆ ಕೌಶಾಲ್ಯಭಿವೃದ್ಧಿ ತರಬೇತಿ ನೀಡಲು ನಿರ್ಧಾರ ಕೈಗೊಳ್ಳಲಾಗಿದೆ ಎಂದು ತಿಳಿಸಿದ್ದಾರೆ.

<><><>

**ಕರ್ನಾಟಕ ವಿಧಾನಮಂಡಲದ 16 ನೇ ವಿಧಾನಸಭೆಯ 9ನೇ ಅಧಿವೇಶನದ ಮುಂದುವರೆದ** ಉಪವೇಶನವು ಮಾರ್ಚ್ 6 ರಂದು ಬೆಳಿಗ್ಗೆ 10.15 ಗಂಟೆಗೆ ಬೆಂಗಳೂರಿನ ವಿಧಾನಸೌಧದಲ್ಲಿರುವ ವಿಧಾನಸಭೆಯ ಸಭಾಂಗಣದಲ್ಲಿ ಸಮಾವೇಶಗೊಳ್ಳಲಿದೆ. 2026 ನೇ ಮಾರ್ಚ್ 6 ರಂದು ಬೆಳಿಗ್ಗೆ 10.15 ಕ್ಕೆ ಮಾನ್ಯ ಮುಖ್ಯಮಂತ್ರಿಗಳು 2026–27 ನೇ ಸಾಲಿನ ಆಯವ್ಯಯ ಮಂಡನೆ ಮಾಡಲಿದ್ದಾರೆ. ಮಾರ್ಚ್ 9 ರಿಂದ 27 ರವರೆಗೆ ರಜಾ ದಿನ ಹೊರತುಪಡಿಸಿ ಸರ್ಕಾರಿ ಕಾರ್ಯಕಲಾಪಗಳು ನಡೆಯಲಿವೆ ಎಂದು ಕರ್ನಾಟಕ ವಿಧಾನಸಭೆಯ ಕಾರ್ಯದರ್ಶಿ ಎಂ.ಕೆ.ವಿಶಾಲಾಕ್ಷಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

<><><>

**ಹುಬ್ಬಳ್ಳಿಯಲ್ಲಿ ನಡೆಯುತ್ತಿರುವ ಮೇಲ್ಸೇತುವೆ ಕಾಮಗಾರಿಯಲ್ಲಿ ಪ್ರಗತಿಯಾಗಿದ್ದು, ಮುಂದಿನ** 6 ತಿಂಗಳಲ್ಲಿ ಕಾಮಗಾರಿಯನ್ನು ಪೂರ್ಣಗೊಳಿಸಲು ಯೋಜನೆ ಹಾಕಿಕೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ಸ್ನೇಹಲ್ ಆರ್ ತಿಳಿಸಿದ್ದಾರೆ. ಕಾಮಗಾರಿಯನ್ನು ಪರಿಶೀಲಿಸಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮೇಲ್ಸೇತುವೆ ಕಾಮಗಾರಿಯನ್ನು ಹೊಸೂರು ವೃತ್ತದಿಂದ ಚೆನ್ನಮ್ಮ ವೃತ್ತದವರೆಗೆ ಕಾಲ್ನಡಿಗೆಯಲ್ಲಿ ವೀಕ್ಷಣೆ ಮಾಡಲಾಗಿದೆ. ಹೊಸೂರು ವೃತ್ತ ಹಾಗೂ ಚೆನ್ನಮ್ಮ ವೃತ್ತದಲ್ಲಿ ಶೀಘ್ರಗತಿಯಲ್ಲಿ ಕಾಮಗಾರಿಯನ್ನು ಕೈಗೊಳ್ಳಲಾಗುವುದು ಎಂದು ಸಂಬಂಧಪಟ್ಟ ಅಧಿಕಾರಿಗಳು ತಿಳಿಸಿದ್ದಾರೆ. ನಗರದಲ್ಲಿ ಕಾಮಗಾರಿಗಳು ನಡೆಯುವಾಗ ಸಾಕ ಷ್ಟ ಸಮಸ್ಯೆಗಳು ಎದುರಾಗುತ್ತವೆ. ಆ ಎಲ್ಲ ಸಮಸ್ಯೆಗಳನ್ನು ಪರಿಹರಿಸಿಕೊಂಡು ಕಾಮಗಾರಿಯನ್ನು ಕೈಗೊಳ್ಳಬೇಕಾಗುತ್ತದೆ. ಮುಂದಿನ 6 ತಿಂಗಳಲ್ಲಿ ಕಾಮಗಾರಿಯನ್ನು ಪೂರ್ಣಗೊಳಿಸದೇ ಇದ್ದಲ್ಲಿ ಗುತ್ತಿದಾರರನ್ನು ಕಪ್ಪು ಪಟ್ಟಿಗೆ ಸೇರಿಸಲು ಕ್ರಮ ಕೈಗೊಳ್ಳಲಾಗುವುದು ಎಂದರು.

<><><>

**ಇಂದು ಛತ್ರಪತಿ ಶಿವಾಜಿ**ಮಹಾರಾಜರ ಜಯಂತಿ. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ, ಕರ್ನಾಟಕ ಮರಾಠ ಸಮುದಾಯಗಳ ಅಭಿವೃದ್ಧಿ ನಿಗಮ, ಇಂದು ಸಂಜೆ 6 ಗಂಟೆಗೆ ಬೆಂಗಳೂರು, ಜೆ.ಸಿ ರಸ್ತೆಯ ರವೀಂದ್ರ ಕಲಾಕ್ಷೇತ್ರದಲ್ಲಿ ಛತ್ರಪತಿ ಶಿವಾಜಿ ಮಹಾರಾಜರ ಜಯಂತಿ ಕಾರ್ಯಕ್ರಮ ಆಯೋಜಿಸಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ, ಬೆಂಗಳೂರು ಶ್ರೀ ಗೋಸಾಯಿ ಮಹಾಸಂಸ್ಥಾನ ಮಠದ ಶ್ರೀ ಮಂಜುನಾಥ ಭಾರತಿ ಸ್ವಾಮೀಜಿ ಅವರು ಪಾಲ್ಗೊಳ್ಳಲಿದ್ದಾರೆ.

<><><>

**ಮಹಿಳೆಯರನ್ನು ಸಾಮಾಜಿಕವಾಗಿ ಮತ್ತು ಆರ್ಥಿಕವಾಗಿ ಅಭಿವೃದ್ಧಿಗೊಳಿಸಲು ಹಾಗೂ ಸ್ವಯಂ** ಉದ್ಯೋಗದಲ್ಲಿ ತೊಡಗಿಸಿಕೊಂಡಿರುವ ಮಹಿಳೆಯರನ್ನು ಮಹಿಳಾ ಉದ್ದಿಮೆದಾರರನ್ನಾಗಿ ಮಾಡಲು ಹಾಗೂ ಮಹಿಳೆಯರು ಉತ್ಪಾದಿಸುವ ವಸ್ತುಗಳಿಗೆ ಉಚಿತವಾಗಿ ಮಾರುಕಟ್ಟೆ ಒದಗಿಸಲು, ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮ ಮುಂದಾಗಿದೆ. ಮಹಿಳಾ ಉದ್ಯಮಿದಾರರು ನೋಂದಣಿ ಮಾಡಿಕೊಳ್ಳಲು ಅವಕಾಶ ಮಾಡಿಕೊಡುವ ಉದ್ದೇಶದಿಂದ ಹೊಸದಾಗಿ ಗೃಹಲಕ್ಷ್ಮಿ ಡಿಜಿಟಲ್ ಮಾರ್ಕೆಟಿಂಗ್ ಅಪ್ಲಿಕೇ ‘ನ್ ಅನ್ನು ಲಾಂಚ್ ಮಾಡಲಾಗಿದ್ದು, ಅರ್ಹರು ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಬಹುದಾಗಿದೆ. ವಿವಿಧ ನಿಗಮದಿಂದ ಹಾಗೂ ಸರ್ಕಾರದ ವಿವಿಧ ನಿಗಮ ಮಂಡಳಿ ಮತ್ತು ಇಲಾಖೆಗಳ ಯೋಜನೆಗಳಡಿ ಸೌಲಭ್ಯ ಪಡೆದ ಮಹಿಳಾ ಫಲಾನುಭವಿಗಳು, ಜಿಲ್ಲಾ, ತಾಲ್ಲೂಕು ಮತ್ತು ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಇತರೆ ಯಶಸ್ವಿ ಮಹಿಳಾ ಉದ್ದಿಮೆದಾರರು ತಾವು ತಯಾರಿಸುವ ಉತ್ಪನ್ನಗಳ ಮಾಹಿತಿ ನೀಡಿ ನೋಂದಣಿ ಮಾಡಿಕೊಳ್ಳಬಹುದು ಎಂದು ಬೆಂಗಳೂರು ಗ್ರಾಮಾಂತರ ಜಿಲ್ಲೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

<><><>

**ಹೆಣ್ಣು ಮಕ್ಕಳಿಗೆ ಸಮಾಜದಲ್ಲಿ ಸುರಕ್ಷಿತ ವಾತಾವರಣ ಕಲ್ಪಿಸುವುದು ಪ್ರತಿಯೊಬ್ಬ** ನಾಗರಿಕರ ಜವಾಬ್ದಾರಿ. ಹೆಣ್ಣು ಮಕ್ಕಳಿಗೆ ಮೌಲ್ಯಾಧಾರಿತ ಶಿಕ್ಷಣ ನೀಡುವ ಮೂಲಕ ಅವರಿಗೆ ಸಮಾನ ಹಕ್ಕು ನೀಡಿ, ಸಬಲರನ್ನಾಗಿ ಮಾಡಬೇಕು ಎಂದು ಹಿರಿಯ ಸಿವಿಲ್ ನ್ಯಾಯಾಧೀಶ ಹಾಗೂ ಉಡುಪಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮನು ಪಟೇಲ್ ಹೇಳಿದ್ದಾರೆ. ಅವರು ಮಣಿಪಾಲದಲ್ಲಿ ಬೇಟಿ ಬಚಾವೋ ಬೇಟಿ ಪಡಾವೋ (ಹೆಣ್ಣು ಮಗಳನ್ನು ರಕ್ಷಿಸಿ ಹೆಣ್ಣು ಮಗಳನ್ನು ಓದಿಸಿ) ಯೋಜನೆಯಡಿ ನಡೆದ ಜಿಲ್ಲಾ ಹಾಗೂ ತಾಲೂಕು ಮಟ್ಟದ ಅಧಿಕಾರಿ ಮತ್ತು ಸಿಬ್ಬಂದಿಗಳ ಒಂದು ದಿನದ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದರು.

<><><>

**ಪೌರಕಾರ್ಮಿಕರು, ಸಫಾಯಿ ಕರ್ಮಚಾರಿಗಳು ಹಾಗೂ ಗ್ರಾಮ ಪಂಚಾಯಿತಿ** ಸ್ವಚ್ಛತಾಗಾರರಿಗೆ ಸರ್ಕಾರದ ವಿವಿಧ ಯೋಜನೆಗಳಡಿ ಲಭ್ಯವಿರುವ ಸೌಲಭ್ಯಗಳನ್ನು ಆದ್ಯತೆಯ ಮೇಲೆ ಸಕಾಲಕ್ಕೆ ದೊರಕಿಸುವಂತೆ ರಾಜ್ಯ ಸಫಾಯಿ ಕರ್ಮಚಾರಿಗಳ ಆಯೋಗದ ಅಧ್ಯಕ್ಷ ಪಿ. ರಘು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಯಾದಗಿರಿ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಜಿಲ್ಲಾ ಮಟ್ಟದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಅವರು, ವಿವಿಧ ಇಲಾಖೆಗಳ ವ್ಯಾಪ್ತಿಯಲ್ಲಿ ಈ ಕಾರ್ಮಿಕರಿಗೆ ಇರುವ ಸಾಲ, ಸಬ್ಸಿಡಿ ಹಾಗೂ ವಿಮೆ ಸೌಲಭ್ಯಗಳನ್ನು ತ್ವರಿತವಾಗಿ ಒದಗಿಸಬೇಕು ಎಂದು ಹೇಳಿದರು.

<><><>

**ಭಾರತೀಯ ಸೇನೆಯಲ್ಲಿ ಅಗ್ನಿಪಥ್ ಯೋಜನೆಯಡಿ 2027ನೇ ಸಾಲಿನ ಅಗ್ನಿವೀರ್** ನೇಮಕಾತಿಗಾಗಿ ದಾವಣಗೆರೆ ಸೇರಿದಂತೆ ರಾಜ್ಯದ ಒಟ್ಟು 11 ಜಿಲ್ಲೆಗಳ ಅವಿವಾಹಿತ ಪುರು ‘ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ದಾವಣಗೆರೆ, ಶಿವಮೊಗ್ಗ, ಬಾಗಲಕೋಟೆ, ವಿಜಯಪುರ, ಧಾರವಾಡ, ಉತ್ತರ ಕನ್ನಡ, ದಕ್ಷಿಣ ಕನ್ನಡ, ಗದಗ, ಉಡುಪಿ, ಹಾವೇರಿ ಮತ್ತು ಚಿಕ್ಕಮಗಳೂರು ಜಿಲ್ಲೆಗಳ ಯುವಕರು ಈ ಪರೀಕ್ಷೆಯಲ್ಲಿ ಭಾಗವಹಿಸಲು ಅರ್ಹರಾಗಿದ್ದಾರೆ.ಆಸಕ್ತ ಅಭ್ಯರ್ಥಿಗಳು ಭಾರತೀಯ ಸೇನೆಯ ಅಧಿಕೃತ ಪೋರ್ಟಲ್ www.joinindianarmy.nic.in ಮೂಲಕ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಬಹುದು. ಆಸಕ್ತ ಅಭ್ಯರ್ಥಿಗಳು ಭಾರತೀಯ ಸೇನೆಯ ಅಧಿಕೃತ ಪೋರ್ಟಲ್ www.joinindianarmy.nic.in ಮೂಲಕ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಬೇಕು.ಏಪ್ರಿಲ್ 1 ರ ಒಳಗಾಗಿ ಅರ್ಜಿ ಸಲ್ಲಿಸಲು ಶಿವಮೊಗ್ಗ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆಯ ಉಪ ನಿರ್ದೇಶಕ ಡಾ. ಸಿ.ಎ. ಹಿರೇಮಠ ತಿಳಿಸಿದ್ದಾರೆ.

<><><>

**ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು**

<><><>

- **ಬಂಡೀಪುರ, ನಾಗರಹೊಳೆ ಹುಲಿ ಸಂರಕ್ಷಿತ ಪ್ರದೇಶದಲ್ಲಿ, ಸಫಾರಿ ಮತ್ತೆ ಆರಂಭಿಸಲು, ಅನುಮತಿ.**

- **ರಾಜ್ಯ ಸರ್ಕಾರ ಆರ್ಥಿಕ ಮುಗ್ಗಟ್ಟಿನಿಂದ ಬಳಲುತ್ತಿದೆ; ವಿಪಕ್ಷ ನಾಯಕ ಆರ್.ಅಶೋಕ ಆರೋಪ.**

- **ಬೆಂಗಳೂರಿನಲ್ಲಿ ಕಸ ವಿಲೇವಾರಿಗೆ ಅಡ್ಡಿಪಡಿಸುವವರ ವಿರುದ್ಧ ಕ್ರಮ – ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ.**

- **ವಿಧಾನಸಭೆಯ 9ನೇ ಅಧಿವೇಶನದ ಮುಂದುವರೆದ ಉಪವೇಶನ ಮಾರ್ಚ್ 6 ರಿಂದ ಆರಂಭ; ಅಂದು 2026–27 ನೇ ಸಾಲಿನ ಆಯವ್ಯಯ ಮಂಡನೆ.**

<><><>

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು**

**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ ಈ ಬೆಳಿಗ್ಗೆ 7 ಗಂಟೆ 35 ನಿಮಿಷಕ್ಕೆ**

******END******